ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡುವ ಕುರಿತು

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

573(606) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಯೋಜನೆಯಡಿಯಲ್ಲಿ ನೋಂದಾವಣೆಯಾಗಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯನ್ನು ತೀವ್ರಗತಿಯಲ್ಲಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು;

(ಉ) ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?